**Bangalore**
**Regional News**
**11.09.2025: 18.40 hrs**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಇಂದಿನಿಂದ ಮೂರು ದಿನ ನಡೆಯಲಿರುವ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನಕ್ಕೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಚಾಲನೆ

೨. ನಟ ದಿವಂಗತ ವಿಷ್ಣುವರ್ಧನ್, ಬಹುಭಾಷಾ ನಟಿ ದಿವಂಗತ ಬಿ.ಸರೋಜಾದೇವಿ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ನೀಡಲು ಸಂಪುಟ ಸಭೆ ನಿರ್ಧಾರ

೩. ಎಲ್ಲಾ ಜಿಲ್ಲಾ, ತಾಲೂಕು ಆಸ್ಪತ್ರೆಗಳ ನವೀಕರಣಕ್ಕೆ ೫೪೦ ಕೋಟಿ ರೂಪಾಯಿ ಅಂದಾಜು ಮೊತ್ತಕ್ಕೆ ಸಂಪುಟ ಒಪ್ಪಿಗೆ

೪. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವುದು ತಪ್ಪಲ್ಲ - ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥನೆ

*><><><*><><><*

ಬೆಂಗಳೂರಿನಲ್ಲಿ ಇಂದಿನಿಂದ ೩ ದಿನಗಳ ಕಾಲ ನಡೆಯುತ್ತಿರುವ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನಕ್ಕೆ ಚಾಲನೆ ದೊರೆತಿದೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸಮ್ಮೇಳನಕ್ಕೆ ಚಾಲನೆ ನೀಡಿದರು. ಪ್ರಾರಂಭದಲ್ಲಿ ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*><><><*><><><*

ನಟ ದಿವಂಗತ ವಿಷ್ಣುವರ್ಧನ್ ಹಾಗೂ ಬಹುಭಾಷಾ ನಟಿ ದಿವಂಗತ ಬಿ.ಸರೋಜಾದೇವಿ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿಯನ್ನು ಘೋಷಿಸಲಾಗಿದೆ. ಕುವೆಂಪು ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂಬ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ನಿರ್ಧರಿಸಲಾಗಿದೆ. ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಸಭೆ ಬಳಿಕ

ಮಾತನಾಡಿದ, ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಇಬ್ಬರೂ ಕಲಾವಿzರ ಸಾಧನೆಯನ್ನು ಪರಿಗಣಿಸಿ ಸರ್ಕಾರ ಈ ತೀರ್ಮಾನ ಕೈಗೊಂಡಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಕುವೆಂಪು ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂಬ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ನಿರ್ಧರಿಸಲಾಗಿದೆ.

*><><><*><><><*

೭೦ ವರ್ಷ ಮೇಲ್ಪಟ್ಟವರಿಗೆ ಆಯುಷ್ಮಾನ್ ಭಾರತ್ ಯೋಜನೆಯಡಿ ಆರೋಗ್ಯ ಸೇವೆ ವಿಸ್ತರಿಸಲು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಗಂಗಾ ಕಲ್ಯಾಣ ಯೋಜನೆ ಗುತ್ತಿಗೆ ೨ ವರ್ಷ ವಿಸ್ತರಿಸಲಾಗಿದೆ. ಸುಮಾರು ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಯಲಹಂಕ ಹೆಬ್ಬಾಳದಲ್ಲಿ ಅತ್ಯಾಧುನಿಕ ಆಸ್ಪತ್ರೆ ನಿರ್ಮಾಣಕ್ಕೆ ಒಪ್ಪಿಗೆ ಸೂಚಿಸಲಾಗಿದೆ. ಕಂದಾಯ ನಿರೀಕ್ಷಕರಿಗೆ ಸುಮಾರು ೩ ಸಾವಿರದ ೫೦೦ ಕ್ರೋಮ್ ಬುಕ್ ಖರೀದಿಗೆ ಒಪ್ಪಿಗೆ ನೀಡಲಾಗಿದೆ. ಸಿಎಂ ಆದಿವಾಸಿ ಗೃಹಭಾಗ್ಯ ಯೋಜನೆ ಜಾರಿ ಮೂಲಕ ಸೋಲಿಗ, ಹಲಸರು, ಸಿದ್ದಿ, ಮಲೆಕುಡಿಯ, ಕಾಡುಕುರುಬ, ಜೇನುಕುರುಬರಿಗೆ ನೂರ ಅರವತ್ತು ಕೋಟಿ ವೆಚ್ಚದ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ. ಎಲ್ಲಾ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗಳ ನವೀಕರಣಕ್ಕೆ ೫೪೦ ಕೋಟಿ ರೂಪಾಯಿಗಳ ಅಂದಾಜು ಮೊತ್ತಕ್ಕೆ ಸಂಪುಟ ಒಪ್ಪಿಗೆ ಸೂಚಿಸಿದೆ.

*><><><*><><><*

“ಬಿಜೆಪಿ ತನ್ನ ಆಡಳಿತ ಅವಧಿಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸಲು ಅವಕಾಶ ಕಲ್ಪಿಸಿದೆ” ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಬಗ್ಗೆ ಸುದ್ದಿಗಾರರು ಪ್ರಶ್ನಿಸಿದಾಗ, “ಬಿಜೆಪಿ ಅಧಿಕಾರದಲ್ಲಿದ್ದಾಗ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸಬಹುದು ಎಂದು ಕಾನೂನು ತಂದಿದೆ. ಚುನಾವಣಾ ಆಯೋಗದ ಉಪಕಾನೂನಿನಲ್ಲಿ ಮತಪತ್ರ ಬಳಸಲು ಅವಕಾಶ ಕಲ್ಪಿಸಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕಾಯ್ದೆ ಜಾರಿಗೆ ತರುವಾಗ, ಬಿಜೆಪಿ ಮಾಡಿದ್ದ ಕಾಯ್ದೆಯನ್ನೇ ಮುಂದುವರಿಸಲಾಗಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವುದರಲ್ಲಿ ತಪ್ಪೇನು ಇಲ್ಲ. ಈ ವಿಚಾರವಾಗಿ ಕಾನೂನು ಸಚಿವರು ಪ್ರಸ್ತಾವನೆ ಸಲ್ಲಿಸಿದ್ದಾರೆ” ಎಂದು ತಿಳಿಸಿದ್ದಾರೆ. ಶಿವಾಜಿನಗರ ಮೆಟ್ರೋ ನಿಲ್ದಾಣಕ್ಕೆ ಸೆಂಟ್ ಮೇರಿಸ್ ಹೆಸರಿಡಬೇಕು ಎಂಬ ಸಿಎಂ ಸಿದ್ದರಾಮಯ್ಯ ಅವರ ಪ್ರಸ್ತಾವನೆಗೆ ಬಿಜೆಪಿ ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಕೇಳಿದಾಗ, “ಮೆಟ್ರೋ ನಿಲ್ದಾಣಗಳಿಗೆ ಹೆಸರಿಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವುದರಲ್ಲಿ ಯಾವುದೇ ತಪ್ಪಿಲ್ಲ. ಈ ವಿಚಾರವಾಗಿ ನಾವು ಚರ್ಚೆ ಮಾಡಿ ತೀರ್ಮಾನ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

*><><><*><><><*

೫೬ನೇ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಇದೇ ೨೨ ರಿಂದ ಜಾರಿಗೆ ಬರುವಂತೆ ಜಿಎಸ್‌ಟಿ ಕಡಿಮೆ ಮಾಡಿರುವ ಹಿನ್ನೆಲೆಯಲ್ಲಿ ಆರೋಗ್ಯ ವಿಮೆಯಲ್ಲಿ ಜಿಎಸ್‌ಟಿಯನ್ನು ಶೂನ್ಯಕ್ಕೆ ಇಳಿಸಿರುವ ಕುರಿತು ಹೊಸಪೇಟೆಯ ಹಿರಿಯ ಆರೋಗ್ಯ ವಿಮಾ ಸಲಹೆಗಾರರಾದ ಸೈಯದ್ ಬಶೀರ್ ಅಹ್ಮದ್ ಆಕಾಶವಾಣಿಗೆ ತಮ್ಮ ಪ್ರತಿಕ್ರಿಯೆ ನೀಡಿದ್ದಾರೆ.

*><><><*><><><*

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮೂಲಕ ಕೈಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಜೆಸ್ಕಾಂನ ವಿದ್ಯುತ್ ಮೀಟರ್ ರೀಡರ್‌ಗಳು ಮನೆ ಮನೆಗೆ ಜಿಯೋ ಟ್ಯಾಗಿಂಗ್ ಮಾಡುವ ಕಾರ್ಯವನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಅಧಿಕಾರಿಗಳಿಗೆ ಸೂಚಿಸಿದರು. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸಮೀಕ್ಷೆ ಕುರಿತು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ವಾಸದ ಎಲ್ಲ ಮನೆಗಳಿಗೆ ವಿದ್ಯುತ್ ಸಂಪರ್ಕ ಇರುವುದನ್ನು ಖಾತ್ರಿ ಪಡಿಸಿಕೊಂಡು, ಆರ್‌ಆರ್ ಮೀಟರ್ ಆಧಾರದ ಮೇಲೆ ಮನೆಗಳನ್ನು ಗುರುತಿಸಬೇಕು. ಅಲ್ಲಿರುವ ಜನರ ಸಮೀಕ್ಷೆ ಮಾಡಿ, ಯಾವುದೇ ಮನೆಗಳು ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗದಂತೆ ನಿಗಾವಹಿಸಬೇಕು. ಮೀಟರ್ ನಂಬರ್ ಇಲ್ಲದ ಅಲೆಮಾರಿ, ಅರೆ ಅಲೆಮಾರಿ ವಾಸಸ್ಥಳ ಮತ್ತು ಕೊಳಚೆ ಪ್ರದೇಶಗಳ, ಅರಣ್ಯ ಪ್ರದೇಶಗಳ ಪ್ರತಿ ಕುಟುಂಬದ ಸಂಖ್ಯೆ ಯುಎಚ್‌ಐಡಿ ಸೃಜಿಸಬೇಕು ಎಂದರು. ಇಂಧನ ಇಲಾಖೆ ಮೀಟರ್ ರೀಡರ್‌ಗಳು ಆರ್.ಆರ್ ನಂಬರ್ ಪ್ರಕಾರ ಜಿ.ಒ ಟ್ಯಾಗಿಂಗ್ ಸ್ಟಿಕರ್ ಅಂಟಿಸುವ ಕಾರ್ಯ ಆರಂಭಿಸಿದೆ. ಇದಾದ ನಂತರ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ಕೈಗೊಳ್ಳಲು ೧೫೦ ಕುಟುಂಬಕ್ಕೆ ಒಬ್ಬ ಗಣತಿದಾರರಂತೆ ೨ ಸಾವಿರಕ್ಕೂ ಹೆಚ್ಚು ಗಣತಿದಾರರನ್ನು ನಿಯೋಜನೆ ಮಾಡಲಾಗುವುದು. ಪ್ರತಿ ೨೦ ಗಣತಿದಾರಿಗೆ ಒಬ್ಬರು ಮೇಲ್ವಿಚಾರಕರನ್ನು ಮತ್ತು ಜಿಲ್ಲೆಗೆ ೫೦ ಮಾಸ್ಟರ್ ಟ್ರೈನರ್ ಗಳನ್ನು ಗುರುತಿಸಿ ನಿಗದಿಪಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

*><><><*><><><*

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಶಿವಾಜಿನಗರದ ರಸೆಲ್ ಮಾರುಕಟ್ಟೆಯ ಪುನರ್ ಅಭಿವೃದ್ಧಿಗೆ ವಿಸ್ತೃತ ಯೋಜನಾ ವರದಿ ಅಂತಿಮ ಹಂತದಲ್ಲಿದ್ದು, ಅದನ್ನು ತ್ವರಿತವಾಗಿ ಅನುಷ್ಠಾನಕ್ಕೆ ತರಲು ಕೇಂದ್ರ ನಗರ ಪಾಲಿಕೆ ಆಯುಕ್ತರಾದ ರಾಜೇಂದ್ರ ಚೋಳನ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೇಂದ್ರ ನಗರ ಪಾಲಿಕೆ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ

ಇಂದು ವಿವಿಧ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳ ಮತ್ತು ನಾಗರಿಕ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ರಸೆಲ್ ಮಾರುಕಟ್ಟೆ ಪಾರಂಪರಿಕ ಕಟ್ಟಡವಾಗಿದ್ದು, ಅದಕ್ಕೆ ಆಧುನಿಕ ಸ್ಪರ್ಶ ನೀಡಿ, ಬೆಂಗಳೂರಿಗೆ ಜೀವಂತ, ಶಾಶ್ವತ ಹಾಗೂ ಜನಸ್ನೇಹಿ ಮಾರುಕಟ್ಟೆಯಾಗಿ ರೂಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪುನರ್ ವಿನ್ಯಾಸಗೊಳಿಸುವ ರಸೆಲ್ ಮಾರುಕಟ್ಟೆಯಲ್ಲಿ, ಸಂಚಾರದ ಸುಲಭತೆ, ದೃಶ್ಯಾವಲೋಕನ ಹಾಗೂ ಪ್ರವೇಶ ಸೌಲಭ್ಯಕ್ಕೆ ಆದ್ಯತೆ ನೀಡಲಾಗುವುದು. ಮಾರಾಟಗಾರರು ಹಾಗೂ ಗ್ರಾಹಕರಿಬ್ಬರಿಗೂ ಅನುಕೂಲವಾಗುವಂತೆ ಮರುರಚನೆ ಮಾಡಲಾಗುವುದು. ಸಮರ್ಪಕ ಪಾರ್ಕಿಂಗ್ ವ್ಯವಸ್ಥೆ, ಒಳಚರಂಡಿ, ನೀರು, ವಿದ್ಯುತ್, ಅಗ್ನಿ ಸುರಕ್ಷತೆ, ಶೌಚಾಲಯ ಸೌಲಭ್ಯಗಳು, ಸಮಗ್ರ ತ್ಯಾಜ್ಯ ವಿಂಗಡಣೆ ಹಾಗೂ ಕಾಂಪೋಸ್ಟಿಂಗ್ ವ್ಯವಸ್ಥೆಯ ಜೊತೆಗೆ ಸೌರಶಕ್ತಿ, ಮಳೆನೀರು ಸಂಗ್ರಹಣೆ ಮತ್ತು ವಿದ್ಯುತ್ ಉಳಿತಾಯ ವಿನ್ಯಾಸ ಮಾಡಲಾಗುತ್ತದೆ ಎಂದು ಅವರು ಹೇಳಿದರು.

*><><><*><><><*

ರಾಜ್ಯ ಸರ್ವೋದಯ ಮಂಡಲದ ಅಧ್ಯಕ್ಷ ಹಾಗೂ ಬರಹಗಾರ ಡಾ.ಎಚ್.ಎಸ್.ಸುರೇಶ್, ಕನ್ನಡ ಸಾಹಿತ್ಯ ಪರಿಷತ್ತು ನೀಡುವ ಪ್ರಸಕ್ತ ಸಾಲಿನ ಎ.ಆರ್.ನಾರಾಯಣ ಘಟ್ಟ ಮತ್ತು ಸರೋಜಮ್ಮ ಗಾಂಧಿ ಪುರಸ್ಕಾರ ಪುದುವಟ್ಟು ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಡಾ.ಸುರೇಶ್ ಅವರು, ರೆಡ್‌ಕ್ರಾಸ್ ಎನ್.ಎಸ್.ಎಸ್. ರಾಷ್ಟ್ರೀಯ ಸೇವಾ ಯೋಜನಾ ಪ್ರಾದೇಶಿಕ ಕೇಂದ್ರ ಸೇರಿದಂತ ಹಲವು ಕಡೆ ಕರ್ತವ್ಯ ನಿರ್ವಹಿಸಿದ್ದಾರೆ. ಅವರು ಬರೆದ ಮುಂಬೈ ಪಾತಕ ಲೋಕದ ಲಕ್ಷ್ಮಣ್ ತುಕಾರಾಂ ಗೋಲೆ ಅವರ ಮನ ಪರಿವರ್ತನೆ ಕುರಿತ 'ಪಾತಕ ಲೋಕದಿಂದ ಗಾಂಧಿಯಾನದೆಡೆಗೆ' ಕೃತಿಯ ನಾಟಕ ರೂಪಾಂತರ, ಕಾಂತೇಶ ಕದರಮಂಡಲಗಿ ಅವರ ನಿರ್ದೇಶನದಲ್ಲಿ ಯಶಸ್ವಿ ಪ್ರದರ್ಶನ ಕಂಡಿದೆ.

*><><><*><><><*

ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಚಿಂಚನಸೂರು ಗ್ರಾಮದ ಸುತ್ತಮುತ್ತಲಿನ ಪ್ರದೇಶದಲ್ಲಿ ಇಂದು ಬೆಳಗ್ಗೆ ೮. ೧೭ರ ವೇಳೆಗೆ ಸಣ್ಣ ಪ್ರಮಾಣದ ಭೂಕಂಪವಾಗಿದೆ. ರಿಕ್ಟರ್ ಮಾಪಕದಲ್ಲಿ ೨.೩ ತೀವ್ರತೆ ದಾಖಲಾಗಿದ್ದು, ಘಟನೆ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದೊಂದಿಗೆ ಸಂಪರ್ಕದಲ್ಲಿರುವುದಾಗಿ ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ.

*><><><*><><><*

ರಾಯಚೂರು ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹೆಚ್.ಎ.ಸಾತ್ವಿಕ್ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

*><><><*><><><*